23

ಇಲಾಖೆ / ವಿಷಯ : DEPARTMENT / SUBJECT: ಸನ್ಮಾನ್ಯ ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ    ದಿನಾಂಕ : DATE 5/1/21

# ಬಿಎಸ್‌ವೈ ಮುಂದೆ ಶಾಸಕರ ಅತೃಪ್ತಿ ಭುಗಿಲು

5/1/21



- ಶಾಸಕರ ಸಭೆಯಲ್ಲಿ ಅಸಮಾಧಾನ ಸ್ಫೋಟ
- ಸಚಿವರ ಅನಾದರಕ್ಕೆ ಶಾಸಕರ ಆಕ್ರೋಶ
- ಕುಡಿಯುವ ನೀರು, ರಸ್ತೆ ಅನುದಾನವೂ ಬಂದಿಲ್ಲ
- ಅನುದಾನವಿಲ್ಲದೇ ಕ್ಷೇತ್ರಕ್ಕೆ ಕಾಲಿಡುವಂತಿಲ್ಲ

ಸಂ.ಕ.ಸಮಾಚಾರ ಬೆಂಗಳೂರು

ಅನುದಾನವಿಲ್ಲದೇ ಅರ್ಧಕ್ಕೆ ನಿಂತಿರುವ ಅಭಿವೃದ್ಧಿ ಕಾಮಗಾರಿಗಳು, ಸಚಿವರ ಸಹಕಾರವಿಲ್ಲದೇ ಅನಾಥ ಪ್ರಜ್ಞೆ ಅನುಭವಿಸುತ್ತಿರುವ ಶಾಸಕರು ಹಾಗೂ ಭವಿಷ್ಯದಲ್ಲಿ ಪಕ್ಷ ಮತ್ತೆ ಅಧಿಕಾರಕ್ಕೆ ಬರಬೇಕಾದರೆ ಸರ್ಕಾರ ಅನುಸರಿಸಬೇಕಾದ ಕನಿಷ್ಠ ಯೋಜನೆಗಳ ಅನುಷ್ಠಾನ ಕುರಿತಂತೆ ಹಲವು ರೀತಿಯ ಅಸಮಾಧಾನವನ್ನು ಬಿಜೆಪಿ ಶಾಸಕರು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಎದುರು ಹೊರ ಹಾಕಿದ್ದಾರೆ.

ನಗರದ ಖಾಸಗಿ ಹೊಟೆಲ್‌ನಲ್ಲಿ ಶಾಸಕರ ಅಸಮಾಧಾನ ತಣಿಸುವ ಪ್ರಯತ್ನವಾಗಿ ಸಿಎಂ ಯಡಿಯೂರಪ್ಪ ಸೋಮವಾರ ಉತ್ತರ ಕರ್ನಾಟಕ ಹಾಗೂ ಕರಾವಳಿ ಭಾಗದ 50ಕ್ಕೂ ಹೆಚ್ಚು ಶಾಸಕರ ಜತೆ ಸಮಾಲೋಚನೆ ವೇಳೆ ಈ ಘಟನೆ ನಡೆದಿದೆ.

ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲು ಉಪಸ್ಥಿತಿಯಲ್ಲಿ ಸಿಎಂ ಯಡಿಯೂರಪ್ಪ ಬಿಜೆಪಿ ಶಾಸಕರೊಂದಿಗೆ ನಡೆಸಿದ ಸಭೆಯಲ್ಲಿ ಹಲವಾರು ಶಾಸಕರು ತಮ್ಮ ಅಳಲು ತೋಡಿಕೊಂಡು ಸದ್ಯದ ಪರಿಸ್ಥಿತಿಯಲ್ಲಿ ಕ್ಷೇತ್ರಗಳಲ್ಲಿ ಸಂಚರಿಸುವುದೇ ಕಷ್ಟಕರ ಎಂಬಂತಹ ಸ್ಥಿತಿ ಇದೆ ಎಂದು ಸೂಚ್ಯವಾಗಿ ತಮ್ಮ ಅಸಮಾಧಾನ ಹೊರಹಾಕಿದರು.

ಅನೇಕ ಶಾಸಕರು ತಮ್ಮ ತಮ್ಮ ಜಿಲ್ಲಾ ಉಸ್ತುವಾರಿ ಸಚಿವ ವರ್ತನೆ ಬಗೆಗೆ ಸಿಎಂ ಎದುರು ನೇರವಾಗಿ ಆಕ್ರೋಶ ವ್ಯಕ್ತಪಡಿಸಿದ್ದು, ಸಚಿವರು ಜಿಲ್ಲೆಗಳಲ್ಲಿ ಬಿಜೆಪಿ ಶಾಸಕರಿಗೆ ಸೂಕ್ತ ಗೌರವ ಕೊಡುತ್ತಿಲ್ಲ. ಸಚಿವರ ಜಿಲ್ಲಾ ಪ್ರವಾಸದ ಕುರಿತಂತೆಯೇ ಶಾಸಕರಿಗೆ ಮಾಹಿತಿ ನೀಡುತ್ತಿಲ್ಲ. ತಮ್ಮ ಕ್ಷೇತ್ರಗಳ ಯಾವುದೇ ಕೆಲಸಗಳನ್ನು ಸಚಿವರ ಬಳಿ ತೆಗೆದುಕೊಂಡು ಹೋದರೆ ಯಾವುದೇ ಕೆಲಸ ಆಗುತ್ತಿಲ್ಲ ಎಂದು ದೂರು ನೀಡಿದ್ದಾರೆ. ಅಷ್ಟೇ ಅಲ್ಲ, ಸಚಿವರು ತಮ್ಮ ಪಕ್ಷದ ಶಾಸಕರಿಗಿಂತ ಅನ್ಯ ಪಕ್ಷಗಳ ಶಾಸಕರಿಗೆ ಹೆಚ್ಚು ಮಹತ್ವ ನೀಡುತ್ತಾರೆ ಎಂಬ ಆರೋಪವೂ ಸಭೆಯಲ್ಲಿ ಕೇಳಿ ಬಂದಿದೆ.

ಕೊರೊನಾ ಕಾರಣದಿಂದಾಗಿ ಯಾವುದೇ ಇಲಾಖೆಯ ಅನುದಾನ ಬಿಡುಗಡೆ ಆಗುತ್ತಿಲ್ಲ. ಯಾವುದೇ ಕೆಲಸ ಕೇಳಿದರೂ ಕೊರೊನಾ ಹಿನ್ನೆಲೆಯಲ್ಲಿ ಅನುದಾನ ಬಿಡುಗಡೆ ಮಾಡದಂತೆ ಹಣಕಾಸು ಇಲಾಖೆ ನಿರ್ಬಂಧ ವಿಧಿಸಿದೆ ಎಂಬ ಉತ್ತರ ಕೊಡುತ್ತಿರುವ ಅಧಿಕಾರಿಗಳು, ಶಾಸಕರ ಯಾವ ಕೆಲಸಗಳನ್ನೂ ಮಾಡಿಕೊಡುತ್ತಿಲ್ಲ. ಕುಡಿಯುವ ನೀರು, ರಸ್ತೆ ಕಾಮಗಾರಿಗಳೂ ಸಹ ನನೆಗುದಿಗೆ ಬಿದ್ದಿವೆ. ಪರಿಸ್ಥಿತಿ ಹೀಗೆಯೇ ಮುಂದುವರಿದರೆ ಪಕ್ಷದ ಶಾಸಕರ ವರ್ಚಸ್ಸಿಗೆ ಇನ್ನಷ್ಟು ಧಕ್ಕೆ ಉಂಟಾಗಲಿದೆ. ಪ್ರತಿಯೊಬ್ಬ ಶಾಸಕರ ಕ್ಷೇತ್ರಗಳಿಗೂ ಕನಿಷ್ಠ ಅನುದಾನ ನೀಡದೇ ಹೋದರೆ ಮುಂದಿನ ಸಲ ಗೆಲ್ಲುವುದೇ ದುಸ್ತರವಾಗಲಿದೆ ಎಂಬ ಎಚ್ಚರಿಕೆಯನ್ನೂ ನೀಡಿದ್ದಾರೆ.

ಶಾಸಕರ ಅಹವಾಲುಗಳನ್ನು ಆಲಿಸಿದ ಸಿಎಂ ಯಡಿಯೂರಪ್ಪ, ಕೊರೊನಾ ಕಾರಣದಿಂದ ಅಭಿವೃದ್ಧಿ ಕಾಮಗಾರಿಗಳು ಹಾಗೂ ಕೆಲ ಹೊಸ ಯೋಜನೆಗಳು ಸ್ಥಗಿತಗೊಂಡಿರುವುದು ನಿಜ. ಬರುವ ಹಣಕಾಸು ವರ್ಷದಲ್ಲಿ ಇದೆಲ್ಲವನ್ನೂ ಸರಿದೂಗಿಸಿಕೊಂಡು ಹೆಚ್ಚು ಅನುದಾನ ಬಿಡುಗಡೆಗೆ ಪ್ರಯತ್ನಿಸಲಾಗುವುದು. ಅಲ್ಲದೇ ಹೊಸ ಯೋಜನೆಗಳ ಅನುಷ್ಠಾನಕ್ಕೂ ಹೆಚ್ಚು ಒತ್ತು ನೀಡಲಾಗುವುದು. ಆಯಾ ಜಿಲ್ಲೆಗಳ ಉಸ್ತುವಾರಿ ಸಚಿವರು ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡಲು ಕಟ್ಟುನಿಟ್ಟಿನ ಸೂಚನೆ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ.

ಪ್ರಸಕ್ತ ವರ್ಷ ಮುಂಗಡ ಪತ್ರದಲ್ಲಿ ಘೋಷಿಸಿದ ಯೋಜನೆಗಳು ಅನುಷ್ಠಾನಗೊಳಿಸಲು ಮುಂದಿನ ಮುಂಗಡ ಪತ್ರದಲ್ಲಿ ಆದ್ಯತೆ ನೀಡಲಾಗುವುದು. ಆರ್ಥಿಕ ಇಲಾಖೆಗೆ ವಿಧಿಸಲಾಗಿರುವ ನಿರ್ಬಂಧವನ್ನು ಸೂಕ್ತ ಸಂದರ್ಭದಲ್ಲಿ ಹಣಕಾಸಿನ ಪರಿಸ್ಥಿತಿ ನೋಡಿಕೊಂಡು ತೆರವುಗೊಳಿಸಲಾಗುವುದು. ನಮ್ಮ ಪಕ್ಷದ ಶಾಸಕರ ಕ್ಷೇತ್ರಗಳಲ್ಲಿ ಕುಡಿಯುವ ನೀರು, ರಸ್ತೆಗಳ ಅಭಿವೃದ್ಧಿ ಸೇರಿದಂತೆ ಆದ್ಯತಾ ವಲಯದ ಕೆಲಸಗಳು ನಿಂತು ಹೋಗದಂತೆ ನೋಡಿಕೊಳ್ಳಲಾಗುವುದು ಎಂದೂ ಸಿಎಂ ಯಡಿಯೂರಪ್ಪ ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಪ್ರಯತ್ನ ಮಾಡಿದರು.

ಡಿಸಿಎಂಗಳಾದ ಗೋವಿಂದ ಕಾರಜೋಳ, ಲಕ್ಷ್ಮಣ ಸವದಿ, ಸಚಿವರಾದ ಬ ರಾಜ ಬೊಮ್ಮಾಯಿ, ಆರ್. ಅಶೋ . ವಿ.ಸೋಮಣ್ಣ, ಬಿ.ಸಿ. ಪಾಟೀಲ ಸಿಎಂ ರಾಜಕೀಯ ಕಾರ್ಯದರ್ಶಿ ಎಂ.ಪಿ. ರೇಣುಕಾಚಾರ್ಯ, ವಿಧಾನಸಭೆಯ ಮುಖ್ಯ ಸಚೇತಕ ವಿ.ಸುನೀಲ್‌ಕುಮಾರ್ ಮತ್ತಿತರರು ಶಾಸಕರ ಜತೆ ಸಭೆಯಲ್ಲಿ ಪಾಲ್ಗೊಂಡಿದ್ದರು.

## ಯತ್ನಾಳ ವಿರುದ್ಧ ಶಿಸ್ತು ಸಮಿತಿಗೆ ದೂರು

**ಬೆಂಗಳೂರು:** ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ಪದೇ ಪದೇ ಅಸಮಾಧಾನದ ಬಹಿರಂಗ ಹೇಳಿಕೆ ನೀಡುತ್ತಿದ್ದ ಬಿಜೆಪಿ ಹಿರಿಯ ಶಾಸಕ



ಬಸನಗೌಡ ಪಾಟೀಲ್ ಯತ್ನಾಳ ಅವರಿಗೆ ಕೊನೆಗೂ ಬಿಜೆಪಿ ಬಿಸಿ ಮುಟ್ಟಿಸಲು ವ ದಾಗಿದೆ.

ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ರಾಜ್ಯ ಬಿಜೆಪಿ ಅಧ್ಯಕ್ಷ ನಳಿನ್‌ಕುಮಾರ್ ಕಟೀಲು ಕೊನೆಗೂ ಯತ್ನಾಳ ಬಗೆಗೆ ಮೌನ ಮುರಿದಿದ್ದಾರೆ. ಶಾಸಕ ಯತ್ನಾಳ ಅವರ ಹೇಳಿಕೆಯನ್ನು ಬಿಜೆಪಿ ರಾಜ್ಯ ಘಟಕ ಗಂಭೀರವಾಗಿ ಪರಿಗಣಿಸಿದೆ. ಈಗಾಗಲೇ ಯತ್ನಾಳ ಅವರ ಹೇಳಿಕೆ ಕುರಿತಂತೆ ಬಿಜೆಪಿ ಕೇಂದ್ರ ಶಿಸ್ತು ಸಮಿತಿಗೆ ದೂರು ನೀಡಲಾಗಿದೆ. ಕೇಂದ್ರ ಸಮಿತಿಯು ವಿಷಯವನ್ನು ಪರಿಶೀಲಿಸಿ ಮುಂದಿನ ಕ್ರಮಕ್ಕೈಗೊಳ್ಳಲಿದೆ ಎಂದು ಹೇಳಿದರು.

ಸಿಎಂ ಯಡಿಯೂರಪ್ಪ ಸೋಮವಾರ ಕರೆದಿದ್ದ ಶಾಸಕರ ಸಭೆಯಲ್ಲಿ ಶಾಸಕ ಯತ್ನಾಳ ಕೂಡ ಭಾಗವಹಿಸಿದ್ದು, ಸಭೆಯಲ್ಲಿ ತಮ್ಮ ಅಸಮಾಧಾನ ಹೊರಹಾಕಿದ್ದಾರೆ. ಆದರೆ ಈ ಬಾರಿ ಯತ್ನಾಳ ಬಹಿರಂಗ ಹೇಳಿಕೆ ನೀಡುವ ಧೈರ್ಯ ಮಾಡಲಿಲ್ಲ. ಸಭೆಯ ಬಳಿಕ ಮಾಧ್ಯಮಗಳಿಂದ ಅಂತರ ಕಾಯ್ದುಕೊಂಡ ಯತ್ನಾಳಗೆ ಪಕ್ಷದ ವರಿಷ್ಠರು ಬಿಸಿ ಮುಟ್ಟಿಸಿದ್ದಾರೆ ಎಂದೇ ಹೇಳಲಾಗುತ್ತಿದೆ.